**All India Radio: Bangalore**
**Regional Bulletin In Kannada**
**26.10.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**26.10.2025 / 6.40 p.m.**

**<><><><>**

ಮುಖ್ಯಾಂಶಗಳು

- ಕರ್ನೂಲ್ ಬಸ್ ದುರಂತದ ಬಳಿಕ ಎಚ್ಚೆತ್ತುಕೊಂಡ ಸರ್ಕಾರ ; ಸಾರಿಗೆ ಸಚಿವರಿಂದ ನಿಗಮಗಳಿಗೆ ಮಹತ್ವದ ಸೂಚನೆ
- ಮನದ ಮಾತಿನಲ್ಲಿ ರಾಜ್ಯದ ಕಾಫಿ ಬಗ್ಗೆ ಪ್ರಧಾನಮಂತ್ರಿ ಪ್ರಸ್ತಾಪ; ಕೇಂದ್ರ ಕಾಫಿ ಮಂಡಳಿ ಸಂತಸ
- ಬೇಸಿಗೆಯಲ್ಲಿ ಬೆಂಗಳೂರಿಗೆ ಕುಡಿಯುವ ನೀರಿನ ಸಮಸ್ಯೆಯಿಲ್ಲ ; ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್
- ರಣಜಿ ಟ್ರೋಫಿ; ಗೋವಾ ತಂಡಕ್ಕೆ ೩೭೧ ರನ್‌ಗಳ ಗುರಿ ನೀಡಿದ ಕರ್ನಾಟಕ \
- ಬೆಂಗಳೂರು ಸೇರಿದಂತೆ ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಭಾರೀ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ

<><><><>

ಕರ್ನೂಲ್ ಬಸ್ ದುರಂತದ ಬಳಿಕ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ಈ ಹಿನ್ನೆಲೆಯಲ್ಲಿ ಬಿಎಂಟಿಸಿ, ಕೆಎಸ್‌ಆರ್‌ಟಿಸಿ ರಾಜ್ಯ ಸಾರಿಗೆ ನಿಗಮಗಳ ಮುಖ್ಯಸ್ಥರಿಗೆ ಪತ್ರ ಬರೆದಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕೆಲವು ನಿಯಮಗಳನ್ನು ಕಡ್ಡಾಯಗೊಳಿಸುವಂತೆ ತಿಳಿಸಿದ್ದಾರೆ. ಪ್ರಮುಖವಾಗಿ ಬಸ್‌ಗಳಲ್ಲಿ ಬೆಂಕಿ ಸ್ಪರ್ಶಕ್ಕೆ ಸರಳವಾಗಿ ಉರಿಯುವ ಅಥವಾ ಇತರೆ ಸ್ಫೋಟಕ ವಸ್ತುಗಳನ್ನು ಸಾಗಿಸದಂತೆ ನಿಗಾವಹಿಸಬೇಕು. ಎಲ್ಲಾ ಹವಾನಿಯಂತ್ರಿತ ಬಸ್‌ಗಳಲ್ಲಿ ತುರ್ತು ಸಂದರ್ಭಗಳಲ್ಲಿ ಕಿಟಕಿಗಳನ್ನು ಒಡೆಯಲು ಸುತ್ತಿಗೆಗಳು ಕಡ್ಡಾಯವಾಗಿರಬೇಕು ಎಂದು ಸೂಚಿಸಿದ್ದಾರೆ. ಲಗೇಜ್ ಸಾಗಿಸುವ ಜಾಗದಲ್ಲಿ ಯಾವುದೇ ವ್ಯಕ್ತಿ ಮಲಗಲು ಅವಕಾಶ ನೀಡಬಾರದು. ಬಸ್‌ಗಳ ನವೀಕರಣದ ಬಗ್ಗೆ ಪರಿಶೀಲನೆ ನಡೆಸಬೇಕು. ಪ್ರಯಾಣಿಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><><>

ಜಿಎಸ್‌ಟಿ  ಉಳಿತಾಯ ಉತ್ಸವ ಜನರಲ್ಲಿ ಉತ್ಸಾಹ ತುಂಬಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಮನ್ ಕಿ ಬಾತ್ ನ ೧೨೭ನೇ ಸಂಚಿಕೆಯಲ್ಲಿ ಮಾತನಾಡಿದ ಅವರು, ಸ್ಥಳೀಯ ವಸ್ತುಗಳ ಖರೀದಿ ಗಮನಾರ್ಹವಾಗಿ ಹೆಚ್ಚಾಗಿದೆ ಎಂದು ತಿಳಿಸಿದ್ದಾರೆ.  ಇದೇ ವೇಳೆ ರಾಜ್ಯದ ಚಿಕ್ಕಮಗಳೂರು, ಕೊಡಗು, ಹಾಸನದ ಕಾಫಿಯನ್ನು ಮನದ ಮಾತಿನಲ್ಲಿ ಪ್ರಸ್ತಾಪಿಸಿ ಭಾರತದ ಕಾಫಿ ಎಂದರೆ ಅದು ಅತ್ಯುತ್ತಮ ಕಾಫಿ ಎಂದು ಬಣ್ಣಿಸಿದ್ದಾರೆ.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ (೩೪ ಸೆಕೆಂಡುಗಳು)**

ಬೆಂಗಳೂರನ್ನು ಕೆರೆ-ಕಟ್ಟೆಗಳ ನಗರ ಎಂದು ಕರೆಯಲಾಗುತ್ತದೆ. ಇಲ್ಲಿನ ಎಂಜಿನಿಯರ್ ಕಪಿಲ್ ಶರ್ಮಾ ಕೆರೆಗಳ ಪುನರುಜ್ಜೀವನಗೊಳಿಸುವ ಅಭಿಯಾನ ಪ್ರಾರಂಭಿಸಿದ್ದಾರೆ. ಕಪಿಲ್ ಅವರ ಸ್ಟೇ ಟ್ರೀಸ್ ತಂಡವು ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ೪೦ ಬಾವಿ ಮತ್ತು ೭ ಕೆರೆಗಳನ್ನು ಪುನರುಜ್ಜೀವನಗೊಳಿಸಿರುವುದರ ಜೊತೆಗೆ ಮರ ನೆಡುವ ಅಭಿಯಾನಗಳಲ್ಲಿ ತೊಡಗಿಸಿಕೊಂಡಿದೆ ಎಂದು ಶ್ಲಾಘಿಸಿದ್ದಾರೆ.  ಈ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ ಸ್ಟೇ ಟ್ರೀಸ್ ತಂಡದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ನಿವೃತ ಲೆಫ್ಟಿನೆಂಟ್ ಕಮಾಂಡರ್ ದಿಯೋಕಾಂತ್ ಫಯಾಸಿ , ಸಂಸ್ಥೆಯ ಕಾರ್ಯದ ಕುರಿತಂತೆ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ : ದಿಯೋಕಾಂತ್ ಫಯಾಸಿ (೨೧ ಸೆಕೆಂಡುಗಳು)**

ಸಂಸ್ಕೃತ ಭಾಷೆಯ ಕುರಿತಂತೆ ಪ್ರಸ್ತಾಪಿಸಿದ ಅವರು, ಸಂಸ್ಕೃತಿ ಮತ್ತು ಸಾಮಾಜಿಕ ಮಾಧ್ಯಮಗಳ ಜಗತ್ತು ಸಂಸ್ಕೃತಕ್ಕೆ ಹೊಸ ಜೀವ ತುಂಬಿದೆ ಎಂದು ತಿಳಿಸಿದ್ದಾರೆ

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ತಮ್ಮ ೧೨೭ ನೇ ಮನ್ ಕೀ ಬಾತ್ ಕಾರ್ಯಕ್ರಮದಲ್ಲಿ ಭಾರತದ ಕಾಫಿ ಕೃಷಿಯ ಬಗ್ಗೆ ಉಲ್ಲೇಖಿಸಿದ್ದಾರೆ. ದೇಶದಲ್ಲಿ ಮೊದಲು ಕಾಫಿ ಬೆಳೆ ಪ್ರಾರಂಭವಾದ ಚಿಕ್ಕಮಗಳೂರು ಸೇರಿದಂತೆ ರಾಜ್ಯದ ಕೊಡಗು ಹಾಸನ ಜಿಲ್ಲೆಗಳು ಹಾಗು ತಮಿಳುನಾಡಿನ ಕಾಫಿ ಕೃಷಿ ಪ್ರದೇಶಗಳ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಪ್ರಧಾನಿಯವರು ಕಾಫಿ ಕೃಷಿಯ ಬಗ್ಗೆ

ಪ್ರಸ್ತಾಪ ಮಾಡಿರುವುದು ಬೆಳೆಗಾರರಿಗೆ ಪ್ರೇರಣೆ ನೀಡಿದೆ ಎಂದು ಭಾರತೀಯ ಕಾಫಿ ಮಂಡಳಿ ಅಧ್ಯಕ್ಷರಾದ ದಿನೇಶ್ ದೇವೃಂದ ತಿಳಿಸಿದ್ದಾರೆ.

**ಧ್ವನಿ: ದಿನೇಶ್ ದೇವೃಂದ, ಭಾರತೀಯ ಕಾಫಿ ಮಂಡಳಿ ಅಧ್ಯಕ್ಷರು (೨೭ ಸೆಕೆಂಡುಗಳು)**

<><><><>

ಕೃಷ್ಣರಾಜ ಸಾಗರ ಜಲಾಶಯ ವರ್ಷದಲ್ಲಿ ಮೂರನೇ ಬಾರಿ ಭರ್ತಿಯಾಗಿ ಇತಿಹಾಸ ನಿರ್ಮಾಣವಾಗಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಇದರಿಂದ ಬೆಂಗಳೂರಿಗೆ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ  ವರ್ಷ ತಮಿಳುನಾಡಿಗೆ ಹೆಚ್ಚುವರಿಯಾಗಿ ೧೩೫.೪೧೨ ಟಿಎಂಸಿ ನೀರು ಹರಿದು ಹೋಗಿದೆ. ಹೀಗಾಗಿ ತಮಿಳುನಾಡು ಹಾಗೂ ಕರ್ನಾಟಕದ ಕಾವೇರಿ ನದಿ ನೀರು ಹಂಚಿಕೆ ಸಮಸ್ಯೆ ಪ್ರಕೃತಿದತ್ತವಾಗಿ ಬಗೆಹರಿದಿದೆ ಎಂದು ಹೇಳಿದ್ದಾರೆ. ೯೩ ವರ್ಷದ ಬಳಿಕ ೩ನೇ ಬಾರಿ ಕೆಆರ್‌ಎಸ್ ಭರ್ತಿಯಾಗಿರುವುದು ಸಂತಸ ತಂದಿದೆ ಎಂದು ತಿಳಿಸಿದ್ದಾರೆ.

<><><><>

ಕಬ್ಬನ್ ಪಾರ್ಕ್ ಮತ್ತು  ಲಾಲ್‌ಬಾಗ್ ರಾಜ್ಯ ಹಾಗೂ ದೇಶದ ಹೆಗ್ಗುರುತುಗಳು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಕಬ್ಬನ್‌ಪಾರ್ಕ್ ನಲ್ಲಿಂದು ಬೆಂಗಳೂರು ನಡಿಗೆ ಕಾರ್ಯಕ್ರಮದ ಅಂಗವಾಗಿ ನಡೆದ ನಾಗರಿಕರ ಜತೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಬ್ಬನ್‌ಪಾರ್ಕ್ ಅಭಿವೃದ್ಧಿಗೆ ಬಿಡಿಎಯಿಂದ ೫ ಕೋಟಿ ರೂಪಾಯಿ ಅನುದಾನ ನೀಡಲಾಗುವುದು" ಎಂದು ಹೇಳಿದ್ದಾರೆ. "ಅರಣ್ಯ ಇಲಾಖೆಯ ಜೊತೆ ಚರ್ಚಿಸಿ ನಗರದಾದ್ಯಂತ ಇರುವ ಅರಣ್ಯ ಇಲಾಖೆ ಜಾಗಗಳಲ್ಲಿ ಕಬ್ಬನ್ ಪಾರ್ಕ್ ಹಾಗೂ ಲಾಲ್ ಬಾಗ್ ಮಾದರಿಯಲ್ಲಿ ಉದ್ಯಾನಗಳ ಅಭಿವೃದ್ಧಿ ಮಾಡಿ, 'ಟ್ರೀ ಪಾರ್ಕ್' ಸ್ಥಾಪಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಭಾರತೀಯ ಸೇನೆಯ ೬೯ನೇ ಪದಾತಿ ದಳದ ದಿನದ ನೆನಪಿಗಾಗಿ ಬೆಳಗಾವಿಯ ಮರಾಠಾ ಲಘುಪದಾತಿ ದಳದ ಶಿವಾಜಿ ಕ್ರೀಡಾಂಗಣದಲ್ಲಿ ಇಂದು ಶೌರ್ಯವೀರ್ ಓಟ - ೨೦೧೫ ಆಯೋಜಿಸಿತ್ತು. ಮರಾಠಾ ಲಘುಪದಾತಿ ದಳದ ಕಮಾಂಡೆಂಟ್ ಬ್ರಿಗೇಡಿಯರ್ ಜಾಯಿದೀಪ ಮುಖರ್ಜಿ ಓಟಕ್ಕೆ ಚಾಲನೆ ನೀಡಿದರು. ಮಕ್ಕಳು, ಮಹಿಳೆಯರು, ಹಿರಿಯರು ಉತ್ಸಾಹದಿಂದ ಭಾಗವಹಿಸಿ ಓಟವನ್ನು ಯಶಸ್ವಿಗೊಳಿಸಿದರು. ಆಕಾಶವಾಣಿಯೊಂದಿಗೆ ಮಾತನಾಡಿದ ಬ್ರಿಗೇಡಿಯರ್ ಜಾಯಿದೀಪ ಮುಖರ್ಜಿ,

**ಧ್ವನಿ : ಜಾಯಿದೀಪ ಮುಖರ್ಜಿ ( ೩೦ ಸೆಕೆಂಡುಗಳು)**

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕೇಂದ್ರ ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ತಿನ ಚುನಾವಣೆ ನಡೆಸುವ ಸಂಬಂಧ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ ನಡೆಸಲಾಗುತ್ತಿದೆ. ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ ಬಗ್ಗೆ ಸೆಪ್ಟೆಂಬರ್ ೩೦ ರಂದು ಪ್ರಕಟಣೆ ಹೊರಡಿಸಲಾಗಿದೆ. ನಮೂನೆ ೧೯ ರಲ್ಲಿ ಮತದಾರರ ಪಟ್ಟಿ ಸೇರ್ಪಡೆಗೆ ಅರ್ಜಿ ಸಲ್ಲಿಸಲು ನವೆಂಬರ್ ೬ ಕೊನೆಯ ದಿನವಾಗಿದೆ. ಡಿಸೆಂಬರ್ ೩೦ ರಂದು ಅಂತಿಮ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ.

<><><>

ದಾವಣಗೆರೆ ಮಹಾನಗರ ಪಾಲಿಕೆ ಹಾಗೂ ದಾವಣಗೆರೆ ಸ್ಮಾರ್ಟ್ ಸಿಟಿ ಲಿಮಿಟೆಡ್ ವತಿಯಿಂದ ನಾಗರಿಕ ಸೇವೆ ಮತ್ತು ಸಾರ್ವಜನಿಕ ಕುಂದುಕೊರತೆ ನಿರ್ವಹಣೆ ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಡಿವಿಜಿ ಸ್ಮಾರ್ಟ್ ಹೆಲ್ಪ್ ಮೊಬೈಲ್ ಅಪ್ಲಿಕೇಷನ್ ಅಭಿವೃದ್ಧಿಪಡಿಸಲಾಗಿದೆ ಎಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ. ಘನತ್ಯಾಜ್ಯ ನಿರ್ವಹಣೆ ಸಂಬಂಧಿಸಿದಂತೆ ಮೊಬೈಲ್ ಅಪ್ಲಿಕೇಷನ್‌ನಲ್ಲಿ ದೂರು ದಾಖಲಿಸುವ ಮೂಲಕ ನಿಗದಿತ ಸಮಯದಲ್ಲಿ ಪರಿಹಾರ ಪಡೆದುಕೊಳ್ಳುವ ಸಲುವಾಗಿ ಅಪ್ಲಿಕೇಷನ್ ರೂಪಿಸಲಾಗಿದೆ ಎಂದು ಹೇಳಿದ್ದಾರೆ.

<><><>

ವಿಜಯಪುರ ಜಿಲ್ಲೆಯ ಕಾರಜೋಳ ಗ್ರಾಮದ ಬಸವೇಶ್ವರ ಸಕ್ಕರೆ ಕಾರ್ಖಾನೆಯಲ್ಲಿ ಕಾನೂನು ಮಾಪನ ಶಾಸ್ತ್ರ ಇಲಾಖೆಯವರಿಂದ ಕಾರ್ಖಾನೆಯಲ್ಲಿನ ವೇ ಬ್ರಿಡ್ಜ್ ಗಳನ್ನು ತಪಾಸಣೆ ಮಾಡಲಾಯಿತು. ಜಿಲ್ಲಾಧಿಕಾರಿಗಳು ಈಗಾಗಲೇ ಸಭೆ ನಡೆಸಿ ಸೂಚನೆ ನೀಡಿದ ಹಿನ್ನಲೆಯಲ್ಲಿ ಜಿಲ್ಲೆಯ ಆಹಾರ ಮತ್ತು ನಾಗರಿಕರ ಸರಬರಾಜು ಇಲಾಖೆಯ ಉಪನಿರ್ದೇಶಕ ವಿನಯಕುಮಾರ ಪಾಟೀಲ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಚೌಗಲಾ ಸೇರಿದಂತೆ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕರು ಮತ್ತು ರೈತ ಮುಖಂಡರ ಸಮ್ಮುಖದಲ್ಲಿ ಕಾರ್ಖಾನೆಯ ವೇ ಬ್ರಿಡ್ಜ್ ತಪಾಸಣೆ ಮಾಡಲಾಯಿತು.

<><><>

ಕರ್ನಾಟಕ ರಾಜ್ಯೋತ್ಸವ ಅಂಗವಾಗಿ ವಿಜಯಪುರ ನಗರದ ಪ್ರಮುಖ ಬೀದಿಗಳಲ್ಲಿರುವ ಎಲ್ಲ ಅಂಗಡಿಗಳಿಗೆ ಕಡ್ಡಾಯವಾಗಿ ಕನ್ನಡದಲ್ಲಿ ಶೇಕಡಾ ೬೦ ರಷ್ಟು ನಾಮಫಲಕಗಳ ಅಳವಡಿಸುವ ಕುರಿತು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಾಳೆ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಅಭಿಯಾನದಲ್ಲಿ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಕಡ್ಡಾಯವಾಗಿ ಗುರುತಿನ ಚೀಟಿಯೊಂದಿಗೆ ಭಾಗವಹಿಸಬೇಕು ಎಂದು ವಿಜಯಪುರ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ತಿಳಿಸಿದ್ದಾರೆ.

<><><>

ಶಿವಮೊಗ್ಗದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಪಂದ್ಯಾವಳಿಯಲ್ಲಿ ಕರ್ನಾಟಕ ನೀಡಿದ ೩೬೧ ರನ್‌ಗಳ ಗುರಿ ಬೆನ್ನತ್ತಿರುವ ಗೋವಾ ತಂಡ ಒಂದು ವಿಕೆಟ್ ನಷ್ಟಕ್ಕೆ ೨೮ ರನ್ ಗಳಿಸಿದೆ. ಮಳೆಯಿಂದಾಗಿ ಪಂದ್ಯ ಕೆಲಕಾಲ ವಿಳಂಬವಾಗಿತ್ತು.  ಕರುಣ್ ನಾಯರ್ ಕರ್ನಾಟಕದ ಪರ ೧೬೪ ರನ್‌ಗಳಿಸಿ ಅಜೇಯರಾಗಿ ಉಳಿದರು. ಎಚ್ಚರಿಕೆಯಿಂದ ಬ್ಯಾಟಿಂಗ್ ಮಾಡಿದ ಕರುಣ್ ನಾಯರ್ ಮೊದಲ ದಿನದಾಟದಲ್ಲಿ ೧೩೮ ಎಸೆತಗಳಲ್ಲಿ ೮೬ ರನ್ ಗಳಿಸಿ ಅಜೇಯರಾಗಿ ಉಳಿದಿದ್ದರು. ಎರಡನೇ ದಿನವೂ ತಮ್ಮ ಇನ್ನಿಂಗ್ಸ್ ಮುಂದುವರಿಸಿದ ಅವರು ಎಂಟು ಬೌಂಡರಿ ಮತ್ತು ಒಂದು ಸಿಕ್ಸರ್ ಸೇರಿದಂತೆ ೧೬೩ ಎಸೆತಗಳಲ್ಲಿ ಶತಕ ಬಾರಿಸಿ ಗಮನ  ಸೆಳೆದರು.

<><><>

ಈಶಾನ್ಯ ಮುಂಗಾರು ಇಂದು ಕರಾವಳಿ ಕರ್ನಾಟಕದಲ್ಲಿ ಸಕ್ರಿಯವಾಗಿತ್ತು. ಒಳನಾಡಿನಲ್ಲಿ ದುರ್ಬಲವಾಗಿತ್ತು. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಬೆಳಗಾವಿ, ಧಾರವಾಡ, ಬೀದರ್, ವಿಜಯಪುರ, ರಾಯಚೂರು ಜಿಲ್ಲೆಗಳಲ್ಲಿಯೂ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಬೆಂಗಳೂರು ನಗರ ಚಿಕ್ಕಾಬಳ್ಳಾಪುರ, ಚಿಕ್ಕಮಗಳೂರು, ಹಾಸನ, ಕೊಡಗು, ರಾಮನಗರ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>